## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1280 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 29-12-2022 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 2021-22ನೇ ಸಾಲಿನಲ್ಲಿ ಹೊಸದಾಗಿ ಎಷ್ಟು ಮದ್ಯಪಾನ ಅಂಗಡಿಗಳಿಗೆ ಪರವಾನಿಗೆ ನೀಡಲಾಗಿದೆ; ಎಷ್ಟು ಮದ್ಯಪಾನದ ವಿವಿಧ ಹಂತದ ಅಂಗಡಿಗಳನ್ನು ಈ ಸಾಲಿನಲ್ಲಿ ಎಷ್ಟು ಮಳಿಗೆಗಳನ್ನು ಸ್ಥಳಾಂತರಿಸಲಾಗಿದೆ; ಪರವಾನಿಗೆ ಹಾಗೂ ಸ್ಥಳಾಂತರಗಳಿಗೆ ಇರುವ ನಿಬಂಧನೆಗಳೇನು; | ರಾಜ್ಯದಲ್ಲಿ 2021-22ನೇ ಸಾಲಿನಲ್ಲಿ ಹೊಸದಾಗಿ 499 ಅಬಕಾರಿ ಸನ್ನದುಗಳನ್ನು ನೀಡಲಾಗಿರುತ್ತದೆ ಹಾಗೂ 395 ಸನ್ನದುಗಳನ್ನು ಸ್ಥಳಾಂತರಿಸಲಾಗಿರುತ್ತದೆ.<br><br>1992ನೇ ಸಾಲಿನಿಂದ ಹೊಸದಾಗಿ ಸಿಎಲ್-2 ಮತ್ತು ಸಿಎಲ್-9 ಸನ್ನದನ್ನು ನೀಡಲು ಸರ್ಕಾರ ನಿರ್ಬಂಧಿಸಿರುವುದರಿಂದ ಅಬಕಾರಿ ಇಲಾಖೆಯಿಂದ ಹೊಸದಾಗಿ ಸಿಎಲ್-2 ಮತ್ತು ಸಿಎಲ್-9 ಸನ್ನದುಗಳ ಮಂಜೂರಾತಿ ನೀಡಲಾಗುತ್ತಿಲ್ಲ.<br><br>ಸಿಎಲ್-4, ಸಿಎಲ್-6ಎ, ಸಿಎಲ್-7, ಸಿಎಲ್-8, ಸಿಎಲ್-7ಎ, ಸಿಎಲ್-11ಸಿ, ಫಾರ್ಮ್ ಸಿಎಲ್-16, ಫಾರ್ಮ್ ಸಿಎಲ್-17 ಮತ್ತು ಫಾರ್ಮ್ ಸಿಎಲ್-18 ಸನ್ನದುಗಳನ್ನು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು, 1968 ರ ನಿಯಮ-3(11-ಸಿ), 8, 8(ಎ) ರಲ್ಲಿ ನಿಗಧಿಪಡಿಸಿರುವ ಸನ್ನದು ಶುಲ್ಕ ಮತ್ತು ಹೆಚ್ಚುವರಿ ಸನ್ನದು ಶುಲ್ಕ ಹಾಗೂ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ-5 ರನ್ವಯ ಉದ್ದೇಶಿತ ಸನ್ನದಿನ 100 ಮೀಟರ್ ಅಂತರದೊಳಗೆ ಯಾವುದೇ ಶೈಕ್ಷಣಿಕ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಆಸ್ಪತ್ರೆಗಳು (30 ಬೆಡ್‌ಗಳನ್ನು ಹೊಂದಿರುವ ಆಸ್ಪತ್ರೆಗಳು) ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳ ಕಾಲೋನಿಗಳು ಇರುವಂತಿಲ್ಲ. ಸ್ಥಳೀಯ ಸಂಸ್ಥೆಗಳು, ಹಾಗೂ ಪತ್ರಾಂಕಿತ ಅಧಿಕಾರಿಗಳ ಕೇಂದ್ರ/ರಾಜ್ಯ ಸರ್ಕಾರಿ ಕಛೇರಿಗಳು ಇರುವಂತಿಲ್ಲ. ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು |

| | | |
|---|---|---|
| | | ಸಂಖ್ಯೆ:12164-12166/2016ರ ದಿನಾಂಕ:31-03-2017ರಲ್ಲಿ ಆದೇಶಿಸಿದಂತೆ 20,000ಕ್ಕಿಂತ ಹೆಚ್ಚಿನ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ 500 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ/ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ. 20,000ಕ್ಕಿಂತ ಕಡಿಮೆ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ 220 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ/ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ.<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ (ಸಿವಿಲ್) ಸಂಖ್ಯೆ:10243/2017ರಲ್ಲಿನ ದಿನಾಂಕ: 11.07.2017ರ ಆದೇಶದಲ್ಲಿ ನೀಡಿದ ಸ್ಪಷ್ಟೀಕರಣದಂತೆ, ಮಹಾನಗರ ಪಾಲಿಕೆ, ನಗರ ಪಾಲಿಕೆ, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಗಳಲ್ಲಿ ಹಾದು ಹೋಗುವ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿರುವ ಸನ್ನದುಗಳನ್ನು ನಿಯಮಾನುಸಾರ ನವೀಕರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br>ಸರ್ಕಾರದ ಪತ್ರ ಸಂಖ್ಯೆ:ಆಇ 36 ಇಡಬ್ಲ್ಯೂಪಿ 2018, ದಿನಾಂಕ:06.08.2020ರಲ್ಲಿ 2011ರ ಜನಗಣತಿಯನ್ವಯ 5000 ಅಥವಾ ಅದಕ್ಕಿಂತ ಹೆಚ್ಚು ಜನಸಂಖ್ಯೆಯುಳ್ಳ ಗ್ರಾಮ ಪಂಚಾಯತಿ / ಸ್ಥಳೀಯ ಪ್ರದೇಶಗಳ ವ್ಯಾಪ್ತಿಯಲ್ಲಿ ಹಾದು ಹೋಗುವ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಹೊಸದಾಗಿ ಸಿಎಲ್-6ಎ ಮತ್ತು ಸಿಎಲ್-7 ಸನ್ನದುಗಳಿಗೆ ಮಾತ್ರ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ (5)ರಡಿಯಲ್ಲಿ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ವಿಧಿಸಿರುವ ನಿಬಂಧನೆಗಳನ್ನು ಹೊರತುಪಡಿಸಿ, ಇತರೆ ಷರತ್ತುಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ನಿಯಮಾನುಸಾರ ಪ್ರಾರಂಭಿಸಲು ವಿನಾಯಿತಿಯನ್ನು ನೀಡಲಾಗಿದೆ. |

| | | |
|---|---|---|
| | | ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ:ಆಇ 33 ಇಎಫ್ ಎಲ್ 2021, ದಿನಾಂಕ:19.01.2022ರಲ್ಲಿ ಸರ್ಕಾರದ ರಾಜಸ್ವ ಹಿತದೃಷ್ಟಿಯಿಂದ ಮತ್ತು ಪ್ರವಾಸೋದ್ಯಮದ ಅಭಿವೃದ್ಧಿಗಾಗಿ ಹೊಸದಾಗಿ ಮಂಜೂರು ಮಾಡುವ ಸಿಎಲ್-7(ಎ) ಸನ್ನದುಗಳಿಗೂ ವಿಸ್ತರಿಸಿ ಅನುಮತಿಯನ್ನು ನೀಡಲಾಗಿದೆ.<br><br>ಈ ಮೇಲ್ಕಂಡ ಮಾನದಂಡಗಳನ್ನು ಸನ್ನದು ಮಂಜೂರಾತಿಗೆ ಕ್ರಮಬದ್ಧವಾಗಿ ಅನುಸರಿಸಲಾಗುತ್ತಿದೆ.<br><br>ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 23 ರನ್ವಯ ಸ್ಥಳಾಂತರಿಸಲು ಆಯಾ ಜಿಲ್ಲೆಯ ಅಬಕಾರಿ ಉಪ ಆಯುಕ್ತರುಗಳಿಗೆ ಅಧಿಕಾರ ಇರುವುದರಿಂದ ಜಿಲ್ಲೆಯ ಅಬಕಾರಿ ಉಪ ಆಯುಕ್ತರುಗಳೇ ಸನ್ನದುಗಳನ್ನು ಸ್ಥಳಾಂತರಿಸುತ್ತಾರೆ.<br><br>ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5ರನ್ವಯ ಉದ್ದೇಶಿತ ಸನ್ನದಿನ 100 ಮೀಟರ್ ಅಂತರದೊಳಗೆ ಯಾವುದೇ ಶೈಕ್ಷಣಿಕ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಆಸ್ಪತ್ರೆಗಳು (30 ಬೆಡ್ ಗಳನ್ನು ಹೊಂದಿರುವ ಆಸ್ಪತ್ರೆಗಳು) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳು ಪ್ರಧಾನವಾಗಿ ವಾಸಿಸುವ ಕಾಲೋನಿಗಳು ಇರುವಂತಿಲ್ಲ. ಯಾವುದೇ ರಾಜ್ಯ ಸರ್ಕಾರದ/ಕೇಂದ್ರ ಸರ್ಕಾರದ ಕಛೇರಿಯಾಗಲೀ ಅಥವಾ ಸ್ಥಳೀಯ ಸಂಸ್ಥೆಗಳ ಕಛೇರಿಯಾಗಲೀ ಅವುಗಳ ಮುಖ್ಯಸ್ಥರು ಗ್ರೂಪ್ "ಎ" ಅಥವಾ ಗ್ರೂಪ್ "ಬಿ" ಅಧಿಕಾರಿಯಾಗಿದ್ದಲ್ಲಿ ಆ ಕಛೇರಿಯು ಆಕ್ಷೇಪಣಾ ಸ್ಥಳವೆಂದು ಪರಿಗಣಿಸಲ್ಪಡುತ್ತದೆ.<br><br>ಸನ್ನದು ಸ್ಥಳಾಂತರಕ್ಕೆ ಸಂಬಂಧಿಸಿದಂತೆ ಸನ್ನದುದಾರರು ಈ ಕೆಳಕಂಡ ದಾಖಲಾತಿಗಳನ್ನು ಸಲ್ಲಿಸಬೇಕಾಗಿರುತ್ತದೆ:<br><br>1) ಅರ್ಜಿದಾರರ ಮನವಿ ಪತ್ರ ನಿಗಧಿತ ನಮೂನೆಯಲ್ಲಿ ಅರ್ಜಿ.<br><br>2) ಪ್ರಸ್ತುತ ಅಬಕಾರಿ ಸಾಲಿನ ಚಾಲ್ತಿಯಲ್ಲಿರುವ ಮೂಲ |



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 26/12/2022 02:33 PM

| | | |
|---|---|---|
| | | ಸನ್ನದು ಪ್ರತಿ.<br>3) ಪ್ರಸ್ತುತ ಅಬಕಾರಿ ಸಾಲಿನ ಅನುಮೋದಿತ ನೀಲಿ ನಕ್ಷೆ.<br>4) ನಿಗಧಿತ ಸನ್ನದು ಸ್ಥಳಾಂತರ ಶುಲ್ಕ ಮತ್ತು ಹೆಚ್ಚುವರಿ ಸನ್ನದು ಶುಲ್ಕ ಪಾವತಿಸಿರುವ ಇ-ಪಾವತಿ ಮೂಲ ಚಲನ್ ಪ್ರತಿ ಮತ್ತು ಕೆ.ಟಿ.ಸಿ-25 ದೃಢೀಕೃತ ಪ್ರತಿ.<br>5) ಸನ್ನದುದಾರರ ಪ್ಯಾನ್ ಕಾರ್ಡ್.<br>6) ಸನ್ನದುದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್ ದೃಢೀಕೃತ ಪ್ರತಿ.<br>7) ಸನ್ನದುದಾರರು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯ ಮಾರಾಟ) ನಿಯಮಗಳು, 1968 ರ ನಿಯಮ 4-ಬಿ ರನ್ವಯ ನೀಡಿರುವ ನೋಟರೀಕೃತ ಮುಚ್ಚಳಿಕೆ ಪತ್ರ.<br>8) ಜಿ.ಎಸ್.ಟಿ ಪ್ರತಿ.<br>9) ಉದ್ದಿಮೆ ಪರವಾನಿಗೆ ಪತ್ರ.<br>10) ಎಫ್.ಎಸ್.ಎಸ್.ಎ.ಐ ಲೈಸನ್ಸ್ ಪ್ರತಿ.<br>11) ಕಟ್ಟಡ ಮಾಲೀಕರ ಒಪ್ಪಿಗೆ ಪತ್ರ.<br>12) ಕಟ್ಟಡದ ಆಸ್ತಿ ತೆರಿಗೆ ರಶೀದಿ ಪ್ರತಿ.<br>13) ಪ್ರಸ್ತಾಪಿತ ಕಟ್ಟಡದ ನೀಲಿ ನಕ್ಷೆ.(ತ್ರಿಪ್ರತಿಗಳಲ್ಲಿ)<br>14) ಪ್ರಸ್ತಾಪಿತ ಕಟ್ಟಡದ 100 ಮೀಟರ್ ಸುತ್ತಳತೆಯ ನೀಲಿ ನಕ್ಷೆ. (ತ್ರಿಪ್ರತಿಗಳಲ್ಲಿ)<br>ಈ ಮೇಲ್ಕಂಡ ಮಾನದಂಡಗಳನ್ನು ಸನ್ನದು ಸ್ಥಳಾಂತರಕ್ಕೆ ಕ್ರಮಬದ್ಧವಾಗಿ ಅನುಸರಿಸಲಾಗುತ್ತಿದೆ. |
| ಆ) | ಅಬಕಾರಿ ಇಲಾಖೆಯಲ್ಲಿ ವಿವಿಧ ವೃಂದದ ಎಷ್ಟು ಹುದ್ದೆಗಳು ಖಾಲಿ ಇವೆ; ಈ ಖಾಲಿ ಇರುವ ಹುದ್ದೆಗಳನ್ನು ಸರ್ಕಾರ ಭರ್ತಿ ಮಾಡಲು ಯಾವ ಕ್ರಮವನ್ನು | ರಾಜ್ಯದ ಅಬಕಾರಿ ಇಲಾಖೆಯಲ್ಲಿ ಒಟ್ಟು 2271 ಹುದ್ದೆಗಳು ಖಾಲಿ ಇದ್ದು, ವೃಂದವಾರು ವಿವರ ಕೆಳಕಂಡಂತಿದೆ. |

| ಕ್ರ. ಸಂ. | ವೃಂದ | ಖಾಲಿ ಹುದ್ದೆಗಳ ಸಂಖ್ಯೆ |
|---|---|---|



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 26/12/2022 02:33 PM

ಕೈಗೊಂಡಿದೆ?

| | | |
|---|---|---|
| 1 | ಗ್ರೂಪ್–ಎ | 34 |
| 2 | ಗ್ರೂಪ್–ಬಿ | 26 |
| 3 | ಗ್ರೂಪ್–ಸಿ | 2178 |
| 4 | ಗ್ರೂಪ್–ಡಿ | 34 |
| | ಒಟ್ಟು | **2272** |

ಅಬಕಾರಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೆಳಕಂಡಂತೆ ಕ್ರಮವಹಿಸಲಾಗುತ್ತಿದೆ.

<u>ಪದೋನ್ನತಿ</u>

ಪದೋನ್ನತಿ ಕೋಟಾದಡಿ ಖಾಲಿ ಇರುವ ಹುದ್ದೆಗಳಿಗೆ ಅರ್ಹ ಅಧಿಕಾರಿ/ನೌಕರರುಗಳ ಲಭ್ಯತೆಯನ್ನು ಆಧರಿಸಿ ಪದೋನ್ನತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.

<u>ನೇರ ನೇಮಕಾತಿ</u>

1. **ಅಬಕಾರಿ ಉಪ ಅಧೀಕ್ಷಕರ** 05 ಹುದ್ದೆಗಳಿಗೆ ಕೆ.ಪಿ.ಎಸ್.ಸಿ. ಯಿಂದ ಅಂತಿಮ ಆಯ್ಕೆ ಪಟ್ಟಿ ಸ್ವೀಕೃತವಾಗಿದ್ದು, ನೇಮಕಾತಿ ಆದೇಶ ಹೊರಡಿಸುವ ಸಂಬಂಧ ದಾಖಲಾತಿಗಳ ಪರಿಶೀಲನೆ ನಡೆಸಲಾಗುತ್ತಿದ್ದು, ನೇಮಕಾತಿ ಆದೇಶ ಹೊರಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ.

2. **ಅಬಕಾರಿ ಉಪ ನಿರೀಕ್ಷಕರ** ಹುದ್ದೆಯಲ್ಲಿ 2019ನೇ ಸಾಲಿನಲ್ಲಿ 59 ಹುದ್ದೆಗಳ ಪೈಕಿ ನೇಮಕಾತಿಗೆ ಬಾಕಿ ಉಳಿದಿರುವ ಒಟ್ಟು 14 ಅಭ್ಯರ್ಥಿಗಳಿಗೆ ಅಂತಿಮ ತಿಳುವಳಿಕೆ ಪತ್ರ ನೀಡಲಾಗಿದ್ದು, ಅಭ್ಯರ್ಥಿಗಳ ನೇಮಕಾತಿ ರದ್ದುಪಡಿಸಿದ ನಂತರದಲ್ಲಿ ಶೇ.10 ರಷ್ಟು ಹೆಚ್ಚುವರಿ ಆಯ್ಕೆಪಟ್ಟಿ ಸಲ್ಲಿಸಲು ಕೆ.ಪಿ.ಎಸ್.ಸಿ ಗೆ ಪ್ರಸ್ತಾವನೆ ಸಲ್ಲಿಸಲು ಹಾಗೂ ಖಾಲಿ ಇರುವ ಹುದ್ದೆಗಳ ಪೈಕಿ ಒಟ್ಟು 227 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 26/12/2022 02:33 PM

| | | |
|---|---|---|
| | | ಮಾಡಲು ಕ್ರಮವಹಿಸಲಾಗುತ್ತಿದೆ.<br><br>3. ಪ್ರಥಮ ದರ್ಜೆ ಸಹಾಯಕರ ಹುದ್ದೆಯಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ 30 ಹುದ್ದೆಗಳಿಗೆ ಕೆ.ಪಿ.ಎಸ್.ಸಿ. ಯಿಂದ ಅಂತಿಮ ಆಯ್ಕೆ ಪಟ್ಟಿ ಸ್ವೀಕೃತವಾಗಿದ್ದು, ನೇಮಕಾತಿ ಆದೇಶ ಹೊರಡಿಸುವ ಸಂಬಂಧ ದಾಖಲಾತಿಗಳ ಪರಿಶೀಲನೆ ನಡೆಸಲಾಗುತ್ತಿದ್ದು, ನೇಮಕಾತಿ ಆದೇಶ ಹೊರಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ಉಳಿದಂತೆ ಖಾಲಿ ಇರುವ ಹುದ್ದೆಗಳ ಪೈಕಿ ಸ್ಥಳೀಯ ವೃಂದದಲ್ಲಿ ಒಟ್ಟು 7 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಕೆ.ಪಿ.ಎಸ್.ಸಿ. ಯಿಂದ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.<br><br>4. ಅಬಕಾರಿ ಪೇದೆ ಹುದ್ದೆಯಲ್ಲಿ 2019ನೇ ಸಾಲಿನ 1003 ಹುದ್ದೆಗಳಲ್ಲಿ ಕರ್ತವ್ಯಕ್ಕೆ ಹಾಜರಾಗದ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಶೇ.10 ರಷ್ಟು ಹೆಚ್ಚುವರಿ ಆಯ್ಕೆ ಪಟ್ಟಿ ಸಲ್ಲಿಸಲು ಕೆ.ಪಿ.ಎಸ್.ಸಿ. ಯನ್ನು ಕೋರಲಾಗಿದೆ.<br><br>5. ಖಾಲಿ ಇರುವ ವಾಹನ ಚಾಲಕರು, ಬೆರಳಚ್ಚುಗಾರರು ಮತ್ತು ಗ್ರೂಪ್-ಡಿ ಹುದ್ದೆಗಳನ್ನು ಬಾಹ್ಯ ಮೂಲಗಳಿಂದ ಸೇವೆಯನ್ನು ಪಡೆದು ಕಾರ್ಯನಿರ್ವಹಿಸಲಾಗುತ್ತಿದೆ.<br><br>ಎಸ್.ಸಿ. ಮತ್ತು ಎಸ್.ಟಿ. ಮೀಸಲಾತಿ ಹೆಚ್ಚಳ ಕುರಿತು ಪರಿಷ್ಕೃತ ರೋಸ್ಟರ್ ಬಿಂದು ನಿಗದಿಪಡಿಸಿ ಆದೇಶ ಹೊರಡಿಸಿದ ನಂತರ ನೇಮಕಾತಿ/ಮುಂಬಡ್ತಿ ಪ್ರಕ್ರಿಯೆಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುತ್ತದೆ. |

ಆಇ 118 ಇಎಲ್‌ಕ್ಯೂ 2022

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 26/12/2022 02:33 PM